# ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಶ್ಯೆ.ಶಾ./ಕೇ.ಮಾ.ಸಂ.ಅ.ಸ.ವಿ.ವೇ.2017.F.B./2017-18

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ: 15 -07-2017.

ಎಲ್ಲಾ ಪ್ರಾಂಶುಪಾಲರು,
ತಾಂತ್ರಿಕ ಮಹಾವಿದ್ಯಾಲಯ/ವೈದ್ಯಕೀಯ ಮಹಾವಿದ್ಯಾಲಯ/
ದಂತ ಮಹಾವಿದ್ಯಾಲಯ/ಆಯುರ್ವೇದ ಮಹಾವಿದ್ಯಾಲಯ.

**Book Post**

ಮಾನ್ಯರೇ,

ವಿಷಯ: 2017ರ ಹೊಸ ಬ್ಯಾಚ್‌ನ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ವಿದ್ಯಾರ್ಥಿಗಳಿಗೆ online ಮೂಲಕ ಅರ್ಜಿ ಸಲ್ಲಿಸುವಂತೆ ಹಾಗೂ ಕಡ್ಡಾಯವಾಗಿ ಆಧಾರ್ ಸಂಖ್ಯೆಯನ್ನು ಹೊಂದಿರುವಂತೆ ಸೂಚಿಸುವ ಕುರಿತು ಪ್ರಚಾರ ನೀಡುವ ಬಗ್ಗೆ.

ಉಲ್ಲೇಖ: 1. ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ಪರಿಷ್ಕೃತ ಮಾರ್ಗಸೂಚಿ ಪತ್ರಸಂಖ್ಯೆ:F.1.6/2007- NS.I ದಿನಾಂಕ:28-05-2010 / 23-07-2010.

2. ಕೇಂದ್ರಸರ್ಕಾರದ ಪ.ಸಂ.:F.1.37/2017.NS-I(NSP) D:14-06-2017.

3. ಕೇಂದ್ರಸರ್ಕಾರದ ಪ.ಸಂ.:F.1.44/2016.NS-I D:29-06-2017.

********

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ ಕರ್ನಾಟಕ ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪಠ್ಯಕ್ರಮದಲ್ಲಿ 2017ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ Top 20th Percentile or 80th Percentileಗಿಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಂದ Central Sector Scheme of Scholorship for College and University Studentsಗಳಿಗೆ online ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website: **<u>www.scholarships.gov.in</u>**ನ National e-Scholarship Portalನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ 2017ರ Fresh Batchನ ವಿದ್ಯಾರ್ಥಿಗಳು ಅರ್ಜಿಗಳನ್ನು "online" ಮೂಲಕ ಸಲ್ಲಿಸುವಂತೆ ಹಾಗೂ ಈ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲಿಚ್ಛಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ಸಂಖ್ಯೆಯನ್ನು ಹೊಂದಿರಬೇಕಾಗಿ ಪ್ರಚಾರ ನೀಡಬೇಕಾಗಿ ಸೂಚಿಸಲಾಗಿರುತ್ತದೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಾರ್ಚ್ 2017ರ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ Top 20th Percentile or 80th Percentileಗಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳು 2017ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ (ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ನವದೆಹಲಿ) ವಿದ್ಯಾರ್ಥಿ ವೇತನಕ್ಕೆ "online" ಮೂಲಕ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಮೆರಿಟ್ ಆಧಾರದ ಮೇಲೆ ಆಯ್ಕೆಗೊಳ್ಳುವ ವಿದ್ಯಾರ್ಥಿಗಳಿಗೆ ಮೊದಲ ಮೂರು ವರ್ಷದ ವ್ಯಾಸಂಗಕ್ಕೆ ವರ್ಷಕ್ಕೆ ತಲಾ ರೂ.10,000/-ಗಳ ವಿದ್ಯಾರ್ಥಿ ವೇತನವನ್ನು ನೀಡಲಾಗುವುದು. ಈ ವಿದ್ಯಾರ್ಥಿ ವೇತನವು ವಿದ್ಯಾರ್ಥಿಯ ಉಚ್ಛ ಶಿಕ್ಷಣ(ಪದವಿ) ಮುಗಿಯುವವರೆಗೆ ಮುಂದುವರೆಯುತ್ತದೆ. ಉನ್ನತ ಶಿಕ್ಷಣದ ಎರಡು ವರ್ಷಗಳ ವ್ಯಾಸಂಗಕ್ಕೆ ವರ್ಷಕ್ಕೆ ತಲಾ ರೂ.20,000/-ಗಳಂತೆ ವಿದ್ಯಾರ್ಥಿ ವೇತನವನ್ನು ನೀಡಲಾಗುವುದು. ಪದವಿ ತರಗತಿಯಲ್ಲಿ ಕನಿಷ್ಠ 60% ಅಂಕಗಳನ್ನು ಗಳಿಸಿರಬೇಕಾಗುತ್ತದೆ. ಮಾರ್ಚ್ 2017ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ Top 20th Percentile or 80th Percentile ಗಿಂತ ಹೆಚ್ಚು ಅಂಕಗಳನ್ನು ಪಡೆದು ತಮ್ಮ ಕಾಲೇಜಿನಲ್ಲಿ ಪದವಿ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಈ ಸಂಬಂಧ ಮಾಹಿತಿಯನ್ನು ನೀಡುವುದು. ಈ ವಿದ್ಯಾರ್ಥಿ ವೇತನದ ಮಾಹಿತಿ ಇರದ ಯಾವುದೇ ಅರ್ಹ ಪ್ರತಿಭಾವಂತ ವಿದ್ಯಾರ್ಥಿ ಈ ವಿದ್ಯಾರ್ಥಿ ವೇತನದಿಂದ ವಂಚಿತನಾಗಬಾರದು. ಆದಕಾರಣ, ಈ ವಿದ್ಯಾರ್ಥಿ ವೇತನದ ಬಗ್ಗೆ ಹಾಗೂ "online" ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ ಸೂಕ್ತ ಪ್ರಚಾರವನ್ನು ಕಾಲೇಜಿನಲ್ಲಿ ನೀಡುವುದು. ವಿದ್ಯಾರ್ಥಿ ವೇತನಕ್ಕೆ "online" ಮೂಲಕ ಅರ್ಜಿ ಸಲ್ಲಿಸುವಲ್ಲಿ ವಿದ್ಯಾರ್ಥಿಗಳು ಹಾಗೂ ಸಂಸ್ಥೆಯವರು ಅನುಸರಿಸಬೇಕಾದ ನಿಯಮ ಹಾಗೂ ಕ್ರಮಗಳ ಕುರಿತು ಮಾರ್ಗಸೂಚಿ ಒಟ್ಟು 08 ಪುಟಗಳಿದ್ದು ಈ ಕೆಳಗಿನಂತೆ ಇರುತ್ತದೆ:

**ವಿದ್ಯಾರ್ಥಿಗಳಿಗೆ "online" ಮೂಲಕ ಅರ್ಜಿಯನ್ನು ತುಂಬಲು ಮಾರ್ಗಸೂಚಿ 07 ಪುಟಗಳು (01-07).**

**ಸಂಸ್ಥೆಯವರಿಗೆ "online" ಮೂಲಕ ಅರ್ಜಿಯನ್ನು ತುಂಬಲು ಮಾರ್ಗಸೂಚಿ 02 ಪುಟಗಳು (07-08).**

**Income Affidavit (Annexure-III) 03 ಪುಟಗಳು.**

ಈ ಮಾರ್ಗಸೂಚಿಯನ್ನು ಪದವಿ ಪೂರ್ವ ಶಿಕ್ಷಣ ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆಯ **Website: <u>http://pue.kar.nic.in</u> =» Scholarship =» MHRD Scholarship =» MHRD Scholarship 2017-Fresh batch**ನಿಂದ **download** ಮಾಡಿಕೊಳ್ಳಬಹುದು ಹಾಗೂ ಮಾಹಿತಿಯನ್ನು ಪಡೆದುಕೊಳ್ಳಬಹುದು. (Link for submission of application through online - website:**<u>www.scholarships.gov.in</u> =» New User? Register.)**

ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ "online" ಮೂಲಕ ನಿರ್ವಹಿಸಿ, ತದನಂತರ ಮುಂದಿನ ಅಗತ್ಯ ಕ್ರಮಕ್ಕಾಗಿ ರಾಜ್ಯದ ನೋಡಲ್ ಅಧಿಕಾರಿಯವರಿಗೆ ಅರ್ಜಿಗಳನ್ನು "online" ಮೂಲಕವೇ ಸಲ್ಲಿಸಬೇಕಿರುತ್ತದೆ (Forward ಮಾಡಬೇಕಿರುತ್ತದೆ). ಹಾಗೂ ತಮ್ಮ ಕಾಲೇಜು / ಸಂಸ್ಥೆಯು National e-Scholarship Portalನಲ್ಲಿ **<u>ನೋಂದಾಯಿಸಲ್ಪಟ್ಟಿದೆಯೇ</u>** ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ಒಂದು ವೇಳೆ ನೋಂದಾವಣೆಯಾಗಿರದಿದ್ದಲ್ಲಿ ಕೂಡಲೇ National e-Scholarship Portalನಲ್ಲಿ ನೋಂದಣಿ ಮಾಡಿಕೊಳ್ಳುವುದು.

ಪ್ರಸ್ತುತ **<u>National e-Scholarship Portal</u>**ನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ಸದರಿ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲಾಗುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **<u>"online" ಮೂಲಕ</u>** ಸಲ್ಲಿಸಿರುವ ಅರ್ಜಿಗಳನ್ನು **<u>"online"</u>**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ಆತನು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **<u>"online" ಮೂಲಕವೇ</u>** ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ಕೊನೆಯ ದಿನಾಂಕದೊಳಗಾಗಿ ಇಲಾಖೆಗೆ ಸಲ್ಲಿಸಲು**<u>( Forward ಮಾಡಲು)</u>** ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನ ಶಾಖೆಯನ್ನು ಸಂಪರ್ಕಿಸಲು ಕೋರಿದೆ.

ವಿದ್ಯಾರ್ಥಿಗಳು **<u>"online" ಮೂಲಕ</u>** ಅರ್ಜಿಯನ್ನು ಎಚ್ಚರಿಕೆಯಿಂದ ಭರ್ತಿ ಮಾಡಿ ಇಲಾಖೆಗೆ **<u>"online" ಮೂಲಕವೇ</u>** ಸಲ್ಲಿಸುವವರೆಗಿನ**<u>( Forward ಮಾಡುವವರೆಗಿನ)</u>** ವಿದ್ಯಾರ್ಥಿ ವೇತನದ ಪ್ರಕ್ರಿಯೆಗೆ ಒಬ್ಬ ಹಿರಿಯ ಪ್ರಾಧ್ಯಾಪಕರನ್ನು / ಅಧಿಕಾರಿಯನ್ನು ಸಂಯೋಜನಾಧಿಕಾರಿಯಾಗಿ ನೇಮಿಸಿ ಅವರಿಗೆ ಪೂರ್ಣ ಜವಾಬ್ದಾರಿ ಕೊಡಲು ಕೋರಿದೆ. ವಿದ್ಯಾರ್ಥಿಗಳು **<u>"online" ಮೂಲಕ</u>** ಅರ್ಜಿಗಳನ್ನು ಸಲ್ಲಿಸಿದ ನಂತರ ಸರಿಯಾಗಿ ತುಂಬಲಾಗಿದೆಯೇ ಎಂದು ಪರಿಶೀಲಿಸಿ ಒಂದಕ್ಕೆ ಪಡೆಯುವುದು. **ಪ್ರತಿ ಅರ್ಜಿಯಲ್ಲಿ:**

- **Annexure-III Income Affidavit** ಆಗಿದ್ದು ಅದನ್ನು ವಿದ್ಯಾರ್ಥಿಗಳು ಸಲ್ಲಿಸಬೇಕು.
- **SC/ST/OBC/P.H.** ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ಜಾತಿ ಹಾಗೂ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ದ್ವಿತೀಯ ಪಿಯುಸಿ ಅಂಕಪಟ್ಟಿಯ ದೃಢೀಕರಿಸಿದ ಪ್ರತಿಯನ್ನು ತಪ್ಪದೇ ಸಲ್ಲಿಸಬೇಕು.
- ವಿದ್ಯಾರ್ಥಿಯು ಕಡ್ಡಾಯವಾಗಿ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ವಿದ್ಯಾರ್ಥಿ ವೇತನಕ್ಕಾಗಿಯೇ ಖಾತೆ ಹೊಂದಿರುವ ಸಂಬಂಧ ಪರಿಶೀಲಿಸಿ, ಬ್ಯಾಂಕ್ ಪಾಸ್ ಬುಕ್‌ನ ಪ್ರತಿಯನ್ನು ಲಗತ್ತಿಸಿದ್ದಾರೆಯೇ, ಬ್ಯಾಂಕ್ ವಿವರಗಳನ್ನು ಸರಿಯಾಗಿ ನಮೂದಿಸಿರುತ್ತಾರೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು.
- <u>ವಿದ್ಯಾರ್ಥಿಗಳು ತಾವು ಹೊಂದಿರುವ ಬ್ಯಾಂಕ್ ಖಾತೆಯೊಂದಿಗೆ ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ಲಿಂಕ್ ಮಾಡುವಂತೆ ಸೂಚಿಸುವುದು.</u>
- ವಿದ್ಯಾರ್ಥಿಗಳು ಪ್ರಾಂಶುಪಾಲರಿಗೆ ಸಲ್ಲಿಸುವ ಪ್ರಿಂಟೆಡ್ ಅರ್ಜಿ ಮತ್ತು ಅಡಕಗಳ(ಲಗತ್ತುಗಳ ಒಂದು ನಕಲು ಪ್ರತಿಯನ್ನು ಮುಂದಿನ ಮಾಹಿತಿಗಾಗಿ/ವಿಚಾರಣೆ ಸಂಬಂಧ ಕಡ್ಡಾಯವಾಗಿ ತಮ್ಮ ಬಳಿ ಇಟ್ಟುಕೊಳ್ಳುವಂತೆ ಮಾರ್ಗದರ್ಶನ ನೀಡುವುದು. ಹಾಗೂ ತಮ್ಮ ಬಳಿಯೂ ಒಂದು ಪ್ರತಿಯನ್ನು ಇಟ್ಟುಕೊಳ್ಳುವುದು.

ಈ ಮೇಲಿನ ಅಡಕಗಳನ್ನು ಲಗತ್ತಿಸಿದ್ದಾರೆಯೇ ಎಂದು ಪರಿಶೀಲಿಸುವುದು. ಕಾಲೇಜಿನ ಪ್ರಾಚಾರ್ಯರು ವಿದ್ಯಾರ್ಥಿಗಳ ಪಟ್ಟಿಯ ಒಂದು ಪ್ರತಿಯನ್ನು ತಮ್ಮ ಬಳಿ ಇಟ್ಟುಕೊಳ್ಳುವುದು. ಪದವಿ ಕಾಲೇಜಿನಲ್ಲಿ ಅಧ್ಯಯನ ಮಾಡುತ್ತಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಈ ವಿದ್ಯಾರ್ಥಿ ವೇತನ ಬಿಡುಗಡೆ ಮಾಡುವ ಪ್ರಕ್ರಿಯೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯೊಂದಿಗೆ ಪೂರ್ಣವಾಗಿ ಸಹಕರಿಸಲು ಕೋರಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.